# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 933
2. ಮಾನ್ಯ ಸದಸ್ಯರ ಹೆಸರು : ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 27.12.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮೈಸೂರು ಸಕ್ಕರೆ ಕಾರ್ಖಾನೆಯನ್ನು ಪುನರಾರಂಭಿಸಲು 2022-23ನೇ ಆಯವ್ಯಯದಲ್ಲಿ ಘೋಷಣೆ ಮಾಡಿದ್ದ ಮೊತ್ತವೆಷ್ಟು; | ಕಾರ್ಖಾನೆಯ ಯಂತ್ರೋಪಕರಣಗಳ ದುರಸ್ತಿಗಾಗಿ ರೂ.50.00 ಕೋಟಿಗಳನ್ನು ಒದಗಿಸುವುದಾಗಿ 2022-23ನೇ ಸಾಲಿನ ಆಯವ್ಯಯ ಖಂಡಿಕೆ:271ರಲ್ಲಿ ಘೋಷಿಸಲಾಗಿರುತ್ತದೆ. |
| (ಆ) | ಆಯ-ವ್ಯಯದಲ್ಲಿ ಘೋಷಣೆ ಮಾಡಿದಂತೆ ಸರ್ಕಾರ ಇದುವರೆವಿಗೂ ಬಿಡುಗಡೆ ಮಾಡಿರುವ ಮೊತ್ತವೆಷ್ಟು; | ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ ಈ ಕಂಪನಿಗೆ 2022-23ನೇ ಸಾಲಿನಲ್ಲಿ ಒಟ್ಟು ರೂ.32.58 ಕೋಟಿಗಳ ಅನುದಾನವನ್ನು ಹಾಗೂ ರೂ.15.00 ಕೋಟಿಗಳ ಸಾಲವನ್ನು (Bridge Loan) ರಾಜ್ಯ ಸರ್ಕಾರದಿಂದ ಬಿಡುಗಡೆಗೊಳಿಸಲಾಗಿರುತ್ತದೆ |
| (ಇ) | ಆಯ-ವ್ಯಯದಲ್ಲಿ ಘೋಷಣೆ ಮಾಡಿದಂತೆ ಹಣ ಬಿಡುಗಡೆ ಮಾಡದಿರುವುದರಿಂದ , ಕಾರ್ಖಾನೆಯ ಅಭಿವೃದ್ಧಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |

| | | |
|---|---|---|
| (ಈ) | ಹಾಗಿದ್ದಲ್ಲಿ, ಆಯ-ವ್ಯಯದಲ್ಲಿ ಘೋಷಿಸಿರುವಂತೆ , ಪೂರ್ಣ ಪ್ರಮಾಣದ ಹಣವನ್ನು ಸರ್ಕಾರ ಕೂಡಲೇ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ ಯಾವಾಗ ಬಿಡುಗಡೆ ಮಾಡಲಾಗುವುದು? | ದಿ ಮೈಸೂರು ಷುಗರ್ ಕಂಪನಿಯಲ್ಲಿ ಯಂತ್ರೋಪಕರಣಗಳ ದುರಸ್ತಿ, ಅಗತ್ಯವಿರುವ ಉಪಕರಣ / ಯಂತ್ರೋಪಕರಣಗಳ ಖರೀದಿ ಮತ್ತು ಅವಶ್ಯಕ ಕಾಮಗಾರಿಗಳನ್ನು ಕೈಗೊಳ್ಳಲು ಅಗತ್ಯವಿರುವ ರೂ.23.25 ಕೋಟಿಗಳನ್ನು ಬಿಡುಗಡೆ ಮಾಡುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಸಲ್ಲಿಸಲಾಗಿದೆ. |

ಸಂಖ್ಯೆ: ಸಿಐ 261 ಸಿಓಎಫ್ 2022

(ಶಂಕರ.ಬಿ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು